# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 05(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 03.04.2021 ರ
## ಸಭಾ ನಡುವಳಿ

ದಿನಾಂಕ: 03.04.2021 ರಂದು ಬೆಳ್ಳಿಗೆ 11.30 ಗಂಟೆಗೆ ವಾರ್ಡ್ ನಂ.05 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪ ವಿಭಾಗ ಕಛೇರಿ, ದಾಸರಹಳ್ಳಿ, ಇಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಜಿ ದೇವರಾಜ್ | ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನಾ ವಿಭಾಗ) |
| 2 | ವೈ.ಎನ್ ಮಹಂತೇಶ್ ಕುಮ ಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಮಹದೇವಪ್ಪ | ರೆವಿನ್ಯೂ ಇನ್ಸ್‌ಪೆಕ್ಟರ್ ವಾರ್ಡ್ ನಂ. 05 |
| 4 | ಸೋಮಶೇಖರ್ | ವ್ಯವಸ್ಥಾಪಕರು, ಸ.ಕಂ.ಅ ಬ್ಯಾ.ಉ.ವಿ |
| 5 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 05 |
| 6 | ಶ್ರೀ ಅಸ್ಲಫ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 05 |
| 7 | ಬಿ. ನಾಗೇಂದ್ರಪ್ಪ | ಎಸ್.ಡಿ.ಎ, ಕಂದಾಯ ಶಾಖೆ, ಥಣಿಸಂದ್ರ |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. **ಕೋವಿಡ್-19ರ ಸಂಬಂಧ ಮುಜಾಗೃತ ಕ್ರಮಗಳ ಬಗ್ಗೆ.** ವಾರ್ಡ್ ಸ.ಅ ರವರು ಮಾತನಾಡಿ ಬೆಂಗಳೂರು ನಗರದಲ್ಲಿ ದಿನೇ ದಿನೇ ಸೋಂಕು ಹೆಚ್ಚಾಗುತ್ತಿದ್ದು ಕರೊನಾ 2ನೇ ಅಲೆಯ ಹೆಚ್ಚಿನ ವೇಗದಲ್ಲಿ ಹರಡುತ್ತಿದ್ದು, ಆದುದರಿಂದ ಸಾರ್ವಜನಿಕರು ಕಡ್ಡಾಯವಾಗಿ ಸಮಾಜಿಕ ಅಂತರ ಮತ್ತು ಮಾಸ್ಕ್‌ಗಳ ಬಳಕೆಗೆ ಹೆಚ್ಚಿನ ಒತ್ತು ನೀಡುವಂತೆ ವಾರ್ಡ್ ವ್ಯಾಪ್ತಿಯಲ್ಲಿ ಅರಿವು ಮೂಡಿಸಬೇಕಾಗಿರುತ್ತದೆನ ಹಾಗೂ 45 ವರ್ಷ ಮೇಲ್ಪಟ್ಟ ಎಲ್ಲಾ ನಾಗರೀಕರಿಗೂ ಕೋವಿಡ್ ಲಸಿಕೆ ನೀಡುವ ಅಭಿಯಾನ ಶುರುವಾಗಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾರೂ ಲಸಿಕೆ ತೆಗೆದುಕೊಳ್ಳುವಂತೆ ಸಾರ್ವಜನಿಕರಿಗೆ ಪ್ರಕಟಣೆ ಮುಖಾಂತರ ತಿಳಿಸಲು ಕ್ರಮ ವಹಿಸುವಂಥೆ ಸೂಚಿಸಿದರು.



Scanned with CamScanner

2. ಹಳೇಯ ನಗರ ಸಭಾ ವ್ಯಾಪ್ತಿಯಲ್ಲಿ ಬರುವ ಶ್ರೀರಾಂಪುರ, ಅಗ್ರಹಾರ ಬಡಾವಣೆ, ಕೋಗಿಲು ಬಡಾವಣೆ, ಪ್ರಕೃತಿ ನಗರಗಳಲ್ಲಿ ಬೇಸಿಗೆಕಾಲ ಪ್ರಾರಂಭವಾಗದ್ದು, ಪ್ರತಿದಿನ ಸಾರ್ವಜನಿಕರಿಂದ ತಮ್ಮ ಅಹವಾಲುಗಳನ್ನು ಸಭೆಗೆ ತಿಳಿಸಿದ್ದು, ಇದರ ಬಗ್ಗೆ ಕೂಡಲೇ ಕ್ರಮ ವಹಿಸಿ ನೀರಿನ ಸಮಸ್ಯೆಯನ್ನು ಬಗೆಹರಿಸುವಂಥೆ ಕ್ರಮ ತೆಗೆದುಕೊಳ್ಳಬೇಕೆಂದು ಮಾನ್ಯ ಅಧ್ಯಕ್ಷರು ಸಭೆಗೆ ತಿಳಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೇಯವರು ಕೇಬಲ್‌ಗಳನ್ನು ಅಳವಡಿಸಲು ರಸ್ತೆಗಳನ್ನು ಅಗೆತ ಮಾಡಿದ್ದು, ರಸ್ತೆಯನ್ನು ಸರಿಯಾಗಿ ಮುಚ್ಚದೇ ಸಾರ್ವಜನಿಕರಿಗೆ ತುಂಬ ತೊಂದರೆಯುಂಟಾಗಿರುತ್ತದೆ. ಇದನ್ನು ಸರಿಪಡಿಸುವಂಥೆ ಸಭೆಯಲ್ಲಿ ನಾಗರಾಜ್ ರವರು ಕೋರಿದರು.
4. ವಾರ್ಡ್‌ನ ಸಾರ್ವಜನಿಕರು ಮಾತನಾಡುತ್ತ ಕಾವೇರಿ ಕುಡಿಯುವ ನೀರಿನ ಸಮಸ್ಯೆಯ ಬಗೆಗ ಕ್ರಮ ತೆಗೆದುಕೊಳ್ಳಬೇಕೆಂದು ಸಭೆಗೆ ತಿಳಿಸಿದರು ಸದರಿ ವಿಷಯಕ್ಕೆ ಸಂಬಂಧಿಸಿದಂತೆ ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಈ ಬಗ್ಗೆ ಕೂಡಲೇ ಕ್ರಮ ತೆಗೆದು ಕೊಳ್ಳುವಂಥೆ ಸಭೆಗೆ ತಿಳಿಸಿದರು.
5. ವಾರ್ಡ್ ವ್ಯಾಪ್ತಿಯ ಅಪಾರ್ಟ್‌ಮೆಂಟ್‌ಗಳಲ್ಲಿ 20 ಫ್ಲಾಟ್‌ಗಳಿಗಿಂತ ಹೆಚ್ಚಿನ ಮನೆಗಳಿದ್ದಲ್ಲಿ ಸದರಿ ಮನೆಗಳಲ್ಲಿ ಉತ್ಪತ್ತಿಯಾಗುವ ಹಸಿ ಮತ್ತು ಒಣ ಕಸವನ್ನು ತಮ್ಮ ಸ್ವಂತ ಖರ್ಚಿನಲ್ಲಿಯೇ ಗೊಬ್ಬರ ಮಾಡಿಕೊಳ್ಳತಕ್ಕದ್ದು ಅಥವ ಸಂಬಂಧಪಟ್ಟವರಿಂದ ಒಡಂಬಡಿಕೆ ಮಾಡಿಕೊಂಡು ಕಸ ವಿಲೇವಾರಿ ಮಾಡಿಕೊಳ್ಳಲು ಸಾರ್ವಜನಿಕರಿಗೆ ಅರಿವು ಮೂಡಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.
6. ವಾರ್ಡ್‌ನ ಅಭಿಯಂತರರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬೋರ್‌ವೆಲ್‌ಗಳ ನಿರ್ವಹಣೆಯ ಹಾಗೂ ಚರಂಡಿಗಳ ನಿರ್ವಹಣೆಯ ಟೆಂಡರ್ ಅವಧಿಯು ಮುಕ್ತಾಯಗೊಂಡಿದ್ದು, ಮುಂದಿನ ದಿನಗಳಲ್ಲಿ ಬೋರ್‌ವೆಲ್‌ಗಳ ನಿರ್ವಹಣೆ ಹಾಗೂ ತುಂಬ ಕಷ್ಟಕರವಾಗಿರುತ್ತದೆ. ಪಾಲಿಕೆಯ ಸಹಾಯ ಆಪ್‌ನಲ್ಲಿ ಸಾರ್ವಜನಿಕರಿಂದ ಹಲವಾರು ದೂರುಗಳೂ ಬರುತ್ತಿರುತ್ತದೆ. ಹಾಗೂ ಅನುದಾನ ಲಭ್ಯವಿರುವುದಿಲ್ಲ ಎಂದು ಸಭೆಗೆ ತಿಳಿಸಿದರು. ಇದಕ್ಕೆ ನೊಡೆಲ್ ಅಧಿಕಾರಿಯವರು ಮುಂದೆ ಬೇಸಿಗೆ ಪ್ರಾರಂಭವಾಗುವುದರಿಂದ ಇದರ ಬಗ್ಗೆ ಕ್ರಮ ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ ರವರೊಂದಿಗೆ ಚರ್ಚಿಸಿ ಕೂಡಲೇ ಅಗತ್ಯ ಕ್ರಮ ವಹಿಸಲು ಸೂಚಿಸಿದರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್-19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾನುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ಮುಂದಿನ ಸಭೆಗೆ ಸಂಬಧಪಟ್ಟ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವಂಥೆ ಕ್ರಮ ವಹಿಸಲು ಕಾರ್ಯದರ್ಶಿಯವರಿಗೆ ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 05(ಜಕ್ಕೂರು)

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 05, (ಜಕ್ಕೂರು)
3/04/2024.

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.



Scanned with CamScanner